# ಕರ್ನಾಟಕ ಪರೀಕ್ಷಾ ಪ್ರಾಧಿಕಾರ
# Karnataka Examinations Authority

KEA


ದಿನಾಂಕ: 09.03.2026

## ಪ್ರಕಟಣೆ

ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.05/2024-25 (ಕಲ್ಯಾಣ ಕರ್ನಾಟಕ) ದಿನಾಂಕ: 08.10.2025
ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.23/2024-25 (ಕಲ್ಯಾಣ ಕರ್ನಾಟಕ) ದಿನಾಂಕ: 31.10.2025
ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.26/2024-25 (ಕಲ್ಯಾಣ ಕರ್ನಾಟಕ) ದಿನಾಂಕ: 15.11.2025

**ಉಳಿಕೆ ಮೂಲ ವೃಂದದ ವಿವಿಧ ಹುದ್ದೆಗಳ ನೇಮಕಾತಿ ಸಂಬಂಧ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಗಳ ಇಲಾಖಾವಾರು ತಾತ್ಕಾಲಿಕ ಅಂಕ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ.**

*****

ದಿನಾಂಕ 21.02.2026 ಮತ್ತು 22.02.2026 ರಂದು ಸರ್ಕಾರದ ವಿವಿಧ ಇಲಾಖೆ/ಸಂಸ್ಥೆ/ನಿಗಮ/ಮಂಡಳಿಗಳಲ್ಲಿ ಖಾಲಿ ಇರುವ ವಿವಿಧ ವೃಂದದ ಹುದ್ದೆಗಳ ನೇಮಕಾತಿ ಸಂಬಂಧ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ದಿನಾಂಕ 23.02.2026 ರಂದು ಪ್ರಕಟಿಸಿ ಆಕ್ಷೇಪಣೆಗಳಿದ್ದಲ್ಲಿ, ದಿನಾಂಕ 25.02.2026 ರವರೆಗೆ ಸಲ್ಲಿಸಲು ಅವಕಾಶ ನೀಡಲಾಗಿತ್ತು.

ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಸಮಿತಿಯ ಮೂಲಕ ಪರಿಶೀಲಿಸಿ, ವಿಷಯ ತಜ್ಞರ ಸಮಿತಿಯ ಶಿಫಾರಸ್ಸಿನಂತೆ ಪರಿಷ್ಕೃತಗೊಂಡ ಕೀ ಉತ್ತರಗಳನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ದಿನಾಂಕ 02.03.2026 ರಂದು ಪ್ರಕಟಿಸಲಾಗಿರುತ್ತದೆ.

ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ತಾತ್ಕಾಲಿಕ ಅಂಕಪಟ್ಟಿಯನ್ನು ಪ್ರಾಧಿಕಾರದ ವೆಬ್‌ಸೈಟ್‌ನಲ್ಲಿ ಪ್ರಕಟಿಸಿ ಸದರಿ ತಾತ್ಕಾಲಿಕ ಅಂಕಪಟ್ಟಿಗೆ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ 06.03.2026 ರೊಳಗೆ ಪೂರಕ ದಾಖಲೆಗಳೊಂದಿಗೆ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿತ್ತು.

ಮುಂದುವರೆದು, ಇಲಾಖಾವಾರು ಪ್ರತ್ಯೇಕ ತಾತ್ಕಾಲಿಕ ಅಂಕ ಪಟ್ಟಿಯನ್ನು ದಿನಾಂಕ 09.03.2026 ರಂದು ಪ್ರಕಟಿಸಲಾಗಿದ್ದು, ದಿನಾಂಕ 11.03.2026 ರಂದು ಅಂತಿಮ ಅಂಕಪಟ್ಟಿಯನ್ನು ಪ್ರಕಟಿಸಿ, ಸಂಬಂಧಪಟ್ಟ ಇಲಾಖೆ/ನಿಗಮ/ಮಂಡಳಿ/ಸಂಸ್ಥೆಗೆ ಅಂತಿಮ ಅಂಕಪಟ್ಟಿಯನ್ನು ಹಸ್ತಾಂತರಿಸಲಾಗುವುದು. ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದಿಂದ ನಿಯಮಾನುಸಾರ ಆಯ್ಕೆ ಪಟ್ಟಿ ಪ್ರಕಟಿಸಲು ಕ್ರಮವಹಿಸುವರು.

ಆಡಳಿತಾಧಿಕಾರಿಗಳು


**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583 Helpline : 080 - 23 460 460.
e-mail : keauthority-ka@nic.in Website : http://kea.kar.nic.in